






ದಿನಾಂಕ:28-12-2025 ರಂದು ಅರಮನೆ ಮೈದಾನದಲ್ಲಿ ಕನ್ನಡ ಹೋರಾಟಗಾರರ ಸಮಿತಿ ಆಯೋಜಿಸಿದ್ದ "ಜನರಾಜ್ಯೋತ್ಸವ" ಕಾರ್ಯಕ್ರಮವನ್ನು ಮಾನ್ಯ ಮುಖ್ಯಮಂತ್ರಿಗಳು ಉದ್ಘಾಟಿಸಿದರು. ಈ ಕಾರ್ಯಕ್ರಮದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಾದ **ಶ್ರೀ ಬಸವರಾಜ ಎಸ್ ಹೊರಟ್ಟಿರವರು** ಕನ್ನಡಪರ ಹೋರಾಟಗಾರರು ರಾಜ್ಯದ ಶಕ್ತಿ. ಎಲ್ಲಾ ಸಂಘಟನೆಗಳು ಒಂದಾಗಿದ್ದು ಹಬ್ಬದ ಊಟ ಮಾಡಿದಷ್ಟು ಸಂತಸ ಆಗಿದೆ. ಕನ್ನಡ ಅಗ್ರ ಭಾಷೆ ಎಲ್ಲಾರೂ ಸೇರಿ ಕನ್ನಡ ಉಳಿಸಿ ಬಳಸಿ ಬೆಳೆಸಬೇಕು ಎಂದು ತಿಳಿಸಿದರು.





ಮಾನ್ಯ ಸಭಾಪತಿ **ಶ್ರೀ ಬಸವರಾಜ ಹೊರಟ್ಟಿ** ಅವರೊಂದಿಗೆ ಮಾನ್ಯ ಹಿಂದುಳಿದ ವರ್ಗ ಸಚಿವರಾದ **ಶ್ರೀ ತಂಗಡಗಿ ಶಿವರಾಜ್ ಸಂಗಪ್ಪ** ಅವರು ಸೌಹಾರ್ದತ ಭೇಟಿ.

# ಅನ್ಯಭಾಷಿಕರ ಜತೆ ಕನ್ನಡದಲ್ಲೇ ಮಾತಾಡಿ: ಸಿಎಂ



**ಸಂ.ಕ.ಸಮಾಚಾರ, ಬೆಂಗಳೂರು**

ಕರ್ನಾಟಕದಲ್ಲಿ ಕನ್ನಡದ ವಾತಾವರಣವನ್ನು ನಿರ್ಮಾಣ ಮಾಡುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಕನ್ನಡ ಚಳವಳಿಗಾರರ ಸಮಿತಿ ವತಿಯಿಂದ ಅರಮನೆ ಮೈದಾನದ ಗಾಯತ್ರಿ ವಿಹಾರದಲ್ಲಿ ಆಯೋಜಿಸಲಾಗಿದ್ದ ಜನರಾಜ್ಯೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಕನ್ನಡ ಕಲಿಯದೆಯೇ ಬದುಕಬಹುದಾದ ವಾತಾವರಣವಿದೆ. ಕನ್ನಡ ಕಲಿಯಲೇಬೇಕಾದ ಅನಿವಾರ್ಯತೆ ಇಲ್ಲ. ಬೇರೆ ಭಾಷೆಯಲ್ಲಿ ಮಾತನಾಡುವವರೊಂದಿಗೆ ನಾವು ಕನ್ನಡದಲ್ಲಿಯೇ ಮಾತನಾಡಬೇಕು. ತಮಿಳುನಾಡು, ತೆಲಂಗಾಣ, ಕೇರಳ, ಮಹಾರಾಷ್ಟ್ರ ಹಾಗೂ ಆಂಧ್ರದಲ್ಲಿ ಅವರವರ ಭಾಷೆಯಲ್ಲಿಯೇ ಮಾತನಾಡುತ್ತಾರೆ. ಕನ್ನಡಿಗರು ಏಕೆ ಕನ್ನಡದಲ್ಲಿ ಮಾತನಾಡಬಾರದು ಕನ್ನಡದಲ್ಲಿಯೇ ಮಾತನಾಡಬೇಕು. ಅನಿವಾರ್ಯವಾದರೆ ಬೇರೆ ಭಾಷೆ ಬಳಸಿ, ಯಾವ ಭಾಷೆ ಕಲಿತರೂ ಕನ್ನಡಿಗರಾಗಿಯೇ ಉಳಿಯಬೇಕೆಂದರು.

ಯಾರೇ ಆಂಗ್ಲ ಭಾಷೆಯಲ್ಲಿ ಮಾತನಾಡಿದರೂ ಕನ್ನಡದಲ್ಲಿಯೇ ಮಾತನಾಡಿಸುವುದು ಹಾಗೂ ಕನ್ನಡದಲ್ಲಿಯೇ ಸಹಿ ಮಾಡುವುದು ಮತ್ತು ಟಿಪ್ಪಣಿ ಬರೆಯುವುದು ಎಂದರು. ಹೊರರಾಜ್ಯಗಳಿಗೆ ಬರೆಯುವಾಗ ಮಾತ್ರ ಆಂಗ್ಲ ಭಾಷೆ ಬಳಸಿದರೂ ಕನ್ನಡ ನಾಡಿನಲ್ಲಿ ಕನ್ನಡವೇ ಸಾರ್ವಭೌಮ ಭಾಷೆ ಎಂದು ತಿಳಿಸಿದರು. ಪ್ರತಿ ಹಳ್ಳಿಯಲ್ಲಿಯೂ ಕನ್ನಡ ಶಾಲೆ ಇರಬೇಕುಂದು ಬರಗೂರು ರಾಮಚಂದ್ರಪ್ಪ ಅವರು ಸಲಹೆ ನೀಡಿದ್ದು, ಗ್ರಾಮಗಳಲ್ಲಿ ಕನ್ನಡ ಶಾಲೆ ಇರಲೇಬೇಕು.

ನಾನೂ ಕೂಡ ಕನ್ನಡ ಶಾಲೆ, ಕನ್ನಡ ಮಾಧ್ಯಮದ ಪರವಾಗಿ ಇರುವವನು. ಇತ್ತೀಚೆಗೆ ಆಂಗ್ಲ ಭಾಷೆಯ ವ್ಯಾಮೋಹ ಹೆಚ್ಚುತ್ತಿದೆ. ಇದಕ್ಕೆ ಪೋಷಕರ ಸಹಾಯವೂ ಅಗತ್ಯ. ಪೋಷಕರ ಸಹಾಯವಿಲ್ಲದೆ ಹೋದರೆ ಕನ್ನಡ ಶಾಲೆಗಳು ಉಳಿದು, ಬೆಳೆಯುವುದು ಕಷ್ಟ ಎಂದರು.

ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಡಾ.ಬರಗೂರು ರಾಮಚಂದ್ರಪ್ಪ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ, ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ನಾರಾಯಣಗೌಡ, ಡಾ.ರಾಜ್ ಕುಮಾರ್ ಅಭಿಮಾನಿಗಳ ಸಂಘದ ಅಧ್ಯಕ್ಷ ಸಾ.ರಾ. ಮಹೇಶ್, ಅರವಿಂದಕುಮಾರ್ ಶೆಟ್ಟಿ, ಸಾಮಾಜಿಕ ಹೋರಾಟಗಾರ್ತಿ ಕೆ. ನೀಲಾ ಮತ್ತಿತರರಿದ್ದರು.

# ಕನ್ನಡಪರ ಹೋರಾಟಗಾರರು ರಾಜ್ಯದ ಶಕ್ತಿ: ಸಭಾಪತಿ ಬಸವರಾಜ ಹೊರಟ್ಟಿ

■ **ಉದಯವಾಣಿ ಸಮಾಚಾರ**

**ಬೆಂಗಳೂರು:** ಕನ್ನಡಪರ ಹೋರಾಗಾರರು ಒಂದಾಗಿರುವ ಈ ದಿನ ಐತಿಹಾಸಿಕ. ಚಳವಳಿಗಾರರು ರಾಜ್ಯದ ಶಕ್ತಿ. ಎಲ್ಲ ಸಂಘಟನೆಗಳು ಒಂದಾಗಿದ್ದು, ಹಬ್ಬದ ಊಟ ಮಾಡಿದಷ್ಟು ಸಂತಸ ಆಗಿದೆ ಎಂದು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.



ಜನ ರಾಜ್ಯೋತ್ಸವ -2025 ಕಾರ್ಯಕ್ರಮದಲ್ಲಿ ಮಾತನಾಡಿ, ಕನ್ನಡಕ್ಕಾಗಿ ನಿಮ್ಮ ಹೋರಾಟ ಅನನ್ಯ. ಮುಖ್ಯಮಂತ್ರಿಗಳು ಸಹ ಅಪ್ಪಟ ಕನ್ನಡಾಭಿಮಾನಿ. ಅವರು ತಮ್ಮ ಎಲ್ಲ ಸಮಸ್ಯೆ ಗಳಿಗೆ ಪರಿಹಾರ ನೀಡುತ್ತಾರೆ. ಕನ್ನಡ ಶ್ರೇಷ್ಠ ಭಾಷೆ ಎಲ್ಲರೂ ಕೂಡಿ ಕನ್ನಡ ಉಳಿಸಿ ಬಳಸಿ ಬೆಳೆಸಬೇಕು. ಕನ್ನಡ ಅಗ್ರಭಾಷೆ ಆಗಬೇಕು, ಮನೆ ಕಟ್ಟುವ ಕೆಲಸ ಇನ್ನಷ್ಟು ನಡೆಯಲಿ ಎಂದರು.

**ರಾಜ್ಯದ ಶಿಕ್ಷಣ ವ್ಯವಸ್ಥೆಯಲ್ಲಿ ಗೊಂದಲ:** ಸಾಹಿತಿ ಬರಗೂರು ರಾಮಚಂದ್ರಪ್ಪ, ರಾಜ್ಯದ ಶಿಕ್ಷಣ ವ್ಯವಸ್ಥೆಯಲ್ಲಿ ಗೊಂದಲ ಮೂಡಿದೆ. ಕೆಪಿಎಸ್ ಶಾಲೆ ಗಳ ಹೆಸರಿನಲ್ಲಿ ಗ್ರಾಮೀಣ ಭಾಗದ ಕನ್ನಡ ಶಾಲೆಗಳ ವಿಲೀನದ ಕೆಲಸ ನಡೆಯಿತ್ತಿದೆ. ಕನ್ನಡ ಶಾಲೆ ಮುಚ್ಚಿದರೆ ಭಾಷೆಗೆ ಅಪಾಯಕ್ಕೆ ಸಿಲುಕುವ ಸಾಧ್ಯತೆಇದೆ. ಆದ್ದರಿಂದ ಈ ಕುರಿತು ಸಿಎಂ ಅವರು ಚರ್ಚೆಗೆ ಅವಕಾಶ ಕೊಡಬೇಕೆಂದು ಮನವಿ ಮಾಡಿ ದರು. ಕನ್ನಡಕ್ಕೆ ಸಾವಿಲ್ಲ, ಸವಾಲುಗಳಿವೆ, ಕನ್ನಡಕ್ಕೆ ಎಲ್ಲವನ್ನೂ ಅರಗಿಸಿಕೊಳ್ಳುವ ಶಕ್ತಿ ಇದ್ದು, ಹಿಂದಿ, ಇಂಗ್ಲಿಷ್ ಸೇರಿ ಪ್ರಾದೇಶಿಕ ಭಾಷೆಗಳ ಅಬ್ಬರದ ಮಧ್ಯೆ ಕನ್ನಡ ತನ್ನತನ ಉಳಿಸಿಕೊಂಡಿದೆ ಎಂದರು.